# ಕರ್ನಾಟಕ ವಿಧಾನ ಪರಿಷತ್ತು

## ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮಂಜುನಾಥ್ ಭಂಡಾರಿ ಇವರ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಸರ್ಕಾರದ ಹೇಳಿಕೆ:-

**ವಿಷಯ : -**

ಭಾರತ ದೇಶದ ಪ್ರಥಮ ಸ್ವಾತಂತ್ರ್ಯ ಸಂಗ್ರಾಮಕ್ಕಿಂತ ಮೊದಲು ಕರ್ನಾಟಕದ ಇತಿಹಾಸದಲ್ಲಿ 1837 ರಲ್ಲಿ ಮಂಗಳೂರನ್ನು ಕೇಂದ್ರ ಸ್ಥಾನವನ್ನಾಗಿ ಮಾಡಿ ಆಡಳಿತ ನಡೆಸುತ್ತಿದ್ದ ಬ್ರಿಟೀಷರನ್ನು ದಕ್ಷಿಣ ಕನ್ನಡ ಜಿಲ್ಲೆಯ ಸುಳ್ಯ ತಾಲ್ಲೂಕಿನ ಕೆದಂಬಾಡಿ ರಾಮಯ್ಯ ಗೌಡರು ರೈತವೀರರನ್ನು ಸಂಘಟಿಸಿ, ಹೋರಾಡಿ ಬ್ರಿಟೀಷ್ ಧ್ವಜವನ್ನು ಇಳಿಸಿ ನಮ್ಮ ದೇಶದ ಸ್ವತಂತ್ರವೆಂದು ಘೋಷಿಸಿ ಸುಮಾರು 13 ದಿವಸಗಳವರೆಗೆ ನಮ್ಮ ನೆಲದ ಕ್ರಾಂತಿಕಾರಿ ಬಾವುಟವನ್ನು ಪ್ರಸ್ತುತ ಬಾವುಟಗುಡ್ಡೆಯೆಂದು ಕರೆಯಲ್ಪಡುವ ಪ್ರದೇಶದಲ್ಲಿ ಏರಿಸಿದ್ದರು ಹಾಗೂ ಮಂಗಳೂರನ್ನು ವಶಪಡಿಸಿದ್ದರು.

ಇಂದಿನ ಪೀಳಿಗೆಯ ಯುವಕರಿಗೆ ನಮ್ಮ ದೇಶದ ಸ್ವಾತಂತ್ರ್ಯ ಹೋರಾಟದ ಸ್ಥಳೀಯ ಇತಿಹಾಸದ ಬಗ್ಗೆ ಮಾಹಿತಿ ನೀಡುವ ನಿಟ್ಟಿನಲ್ಲಿ ಬ್ರಿಟೀಷರಿಂದ ಸ್ವಾತಂತ್ರ್ಯ ದೊರಕಿಸಿ ಹುತಾತ್ಮರಾದ ಕೆದಂಬಾಡಿ ರಾಮಯ್ಯಗೌಡ ಹೆಸರಿನಲ್ಲಿ ಅಧ್ಯಯನ ಪೀಠವನ್ನು ಸ್ಥಾಪಿಸುವುದು ಸಂದರ್ಭೋಚಿತವಾಗಿದೆ. ಆದ್ದರಿಂದ ರಾಮಯ್ಯಗೌಡ ಹೆಸರಿನಲ್ಲಿ ಅಧ್ಯಯನ ಪೀಠವನ್ನು ಮಂಗಳೂರು ವಿಶ್ವವಿದ್ಯಾಲಯದಲ್ಲಿ ಸ್ಥಾಪಿಸಿ ಅಗತ್ಯ ಅನುದಾನ ಒದಗಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಇಲಾಖೆ ಮಂತ್ರಿಗಳ ಮೂಲಕ ಸರ್ಕಾರದ ಗಮನ ಸೆಳೆಯಬಯಸುತ್ತೇನೆ.

**ಉತ್ತರ:-**

ಮಂಗಳೂರು ವಿಶ್ವವಿದ್ಯಾಲಯದಲ್ಲಿ ಕೆದಂಬಾಡಿ ರಾಮಯ್ಯಗೌಡ ಹೆಸರಿನಲ್ಲಿ ಅಧ್ಯಯನ ಪೀಠವನ್ನು ಸ್ಥಾಪಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ.

**ಇಡಿ/95/ಯುಆರ್‌ಸಿ /2024**

**(ಡಾ|| ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು.